**3ನೇ ಅಪರ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ, ಕನಕಪುರ**

**ಸಿ.ಸಿ ನಂಃ 730/2011**

| | ಪ್ರಾಸಾಃ- | 2 |
|---|---|---|
| ಹೆಸರು | ಶಿವ | |
| ತಂದೆಯ ಹೆಸರು | ವೆಂಕಟೇಶ್ | |
| ವಯಸ್ಸು | 34 ವರ್ಷ | |
| ಉದ್ಯೋಗ | ಚಾಲಕ | |
| ವಿಳಾಸ | ಕನಕಪುರ | |

(ಸಾಕ್ಷಿ ವಿಚಾರಣೆ ಕಲಂ.299 ಭಾರತೀಯ ದಂಡ ಪ್ರಕ್ರಿಯಾ ಸಂಹಿತೆ ಅಡಿ/ ಕಲಂ 335 ಭಾರತೀಯ ನಾಗರೀಕ ಸುರಕ್ಷಾ ಸಂಹಿತೆ 2023)

ದಿಃ 01.07.2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ ಎಪಿಪಿ ರವರಿಂದಃ-**

5 ನೇ ಆರೋಪಿ ಇತರ ಆರೋಪಿಗಳ ಜೊತೆ ಸೇರಿ ಗುಂಪು ಕಟ್ಟಿ ಕೊಂಡು ಬಂದು ಕೈಗಳಲ್ಲಿ ಮಾರಕ ಆಯುಧಗಳನ್ನು ಹಿಡಿದು ನನಗೆ ಹೊಡೆಯಲು ಬಂದಿರುವುದಿಲ್ಲ. ಈ ಸಂಬಂಧ ನಾನು ಯಾವುದೇ ದೂರನ್ನು ನೀಡಿರುವುದಿಲ್ಲ. ನನ್ನ ಸಮಕ್ಷಮ ಸ್ಥಳ ಪರಿಶೀಲಿಸಿ, ಮಹಜರ್ ಕ್ರಮ ಜರುಗಿಸಿ ಯಾವುದೇ ವಸ್ತುಗಳನ್ನು ಅಮಾನತುಪಡಿಸಿಕೊಂಡಿರುವುದಿಲ್ಲ. ಈ ಸಂಬಂಧ ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಸ.ಸ.ಅ ರವರು ಅನುಮತಿ ಕೋರಿದ್ದಾರೆ. ಅನುಮತಿಸಲಾಯಿತು).

ಪಾಟೀ ಸವಾಲುಃ ಎಪಿಪಿ **ರವರಿಂದಃ-**

ದಿಃ 22.10.2010 ರಂದು ರಾತ್ರಿ 9.30 ಗಂಟೆ ಸಮಯದಲ್ಲಿ 5 ನೇ ಆರೋಪಿ ಇತರ ಆರೋಪಿಗಳ ಜೊತೆ ಸೇರಿಕೊಂಡು ಕೈಯಲ್ಲಿ ಲಾಂಗ್ , ವಿಕೆಟ್ , ಹೊಡೆದ ಗಾಜಿನ ಬಾಟಲ್ ನ್ನು ಕೈಯಲ್ಲಿ ಹಿಡಿದುಕೊಂಡು ಕೊಲೆ ಮಾಡುವ ಉದ್ದೇಶದಿಂದ ನನಗೆ, ಚಾಸಾ - 2 ಮತ್ತು 3 ರವರಿಗೆ ಹೊಡೆದು ರಕ್ತಗಾಯ ಪಡಿಸಿರುತ್ತಾರೆ ಎಂದರೆ ಸರಿಯಲ್ಲ

5 ನೇ ಆರೋಪಿ ಇತರ ಆರೋಪಿಗಳ ಜೊತೆ ಸೇರಿಕೊಂಡು ನನಗೆ ಗಾಜಿನ ಬಾಟಲ್ ಚೂರಿನಿಂದ ನನಗೆ ಬೆನ್ನಿಗೆ ಹೊಡೆದು ರಕ್ತಗಾಯ ಪಡಿಸಿರುತ್ತಾರೆ ಎಂದರೆ ಸರಿಯಲ್ಲ. 5 ನೇ ಆರೋಪಿ ಇತರ ಆರೋಪಿಗಳ ಜೊತೆ ಸೇರಿಕೊಂಡು ನನಗೆ ಪ್ರಾಣ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಅದೇ ದಿನ ನನ್ನ ಸಮಕ್ಷಮ ಸ್ಥಳ ಪರಿಶೀಲನೆ ಮಾಡಿ ಮಹಜರ್ ಕ್ರಮ ಜರುಗಿಸಿ ನಾಕ್ ಔಟ್ ಬಿಯರ್ ಬಾಟಲ್ , ರಕ್ತ ಕಲೆ ಆಗಿರುವ ಟೀ ಶರ್ಟ್ ನ್ನು ಮತ್ತು ಮೋಟಾರ್ ಸೈಕಲನ್ನು ಅಮಾನತ್ತು ಪಡಿಸಿಕೊಂಡು ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

**(ಸಾಕ್ಷಿಯ ವಿಚಾರಣೆಯನ್ನು ನಾನು ತೆರೆದ ನ್ಯಾಯಾಲಯದಲ್ಲಿ ಪಡೆದುಕೊಂಡಿರುತ್ತೇನೆ ಎಂದು ದೃಢಿಕರೀಸುತ್ತೇನೆ.)**

**ಓ ಹೇ ಕೇ ಸ ಇ**

ಮೂರನೇ **ಅಪರ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್‌ಸಿ ಕನಕಪುರ.**